## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ತೀವ್ರ ನಿಗಾ ಘಟಕಗಳನ್ನು ವೆಂಟಿಲೇಟರ್ ಸಮೇತ ಸ್ಥಾಪಿಸುವ ಬಗ್ಗೆ.

ಓದಲಾಗಿದೆ:- ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರ ಏಕ ಕಡತ ಸಂಖ್ಯೆ: ಜೆಡಿಎಂ/ಎಂಡಿಪಿ/26/ 2016-17, ದಿನಾಂಕ: 28/09/2016.

*****

ಪ್ರಸ್ತಾವನೆ:

ಮಾನ್ಯ ಮುಖ್ಯಮಂತ್ರಿಗಳು 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸರ್ಕಾರಿ ಆಸ್ಪತ್ರೆಗಳಿಗೆ ಬರುವ ರೋಗಿಗಳ ಪೈಕಿ ಕೆಲವರು ಗಂಭೀರ ಸ್ವರೂಪದ ಖಾಯಿಲೆಯಿಂದ ಬಳಲುತ್ತಿದ್ದು, ಅಂತಹ ರೋಗಿಗಳಿಗೆ ವೆಂಟಿಲೇಟರ್ ಸಹಿತ ಅತ್ಯಾಧುನಿಕ ಸಾಧನ ಸಲಕರಣೆಗಳ ಸಹಾಯದಿಂದ ನುರಿತ ತಜ್ಞ ವೈದ್ಯರು ಮತ್ತು ಸಿಬ್ಬಂದಿಯಿಂದ ಚಿಕಿತ್ಸೆ ಅವಶ್ಯಕತೆ ಇರುವುದನ್ನು ಮನಗಂಡು ಆಯವ್ಯಯ ಭಾಷಣದ ಕಂಡಿಕೆ-159 ರಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ಕೆಲವು ತಾಲ್ಲೂಕು ಆಸ್ಪತ್ರೆಗಳಲ್ಲಿ ವೆಂಟಿಲೇಟರ್ ಸಹಿತ ತೀವ್ರ ನಿಗಾ ಘಟಕ ಸ್ಥಾಪಿಸಲಾಗುವುದು ಎಂದು ಘೋಷಿಸಿದ್ದರು. ಈ ಹಿನ್ನೆಲೆಯಲ್ಲಿ ಈಗಾಗಲೇ 25 ತಾಲ್ಲೂಕು ಆಸ್ಪತ್ರೆಗಳಲ್ಲಿ ತೀವ್ರ ನಿಗಾ ಘಟಕಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ.

ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ತಾಲ್ಲೂಕು ಆಸ್ಪತ್ರೆಗಳಲ್ಲಿ ತೀವ್ರ ನಿಗಾ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಒಂದು ತೀವ್ರ ನಿಗಾ ಘಟಕ ಸ್ಥಾಪಿಸಲು ಕನಿಷ್ಠ ರೂ.27 ಲಕ್ಷಗಳಷ್ಟು ಅಂದಾಜು ವೆಚ್ಚ ಅಗತ್ಯವಿರುತ್ತದೆ. ಈ ವೆಚ್ಚವನ್ನು ಶಾಸಕರ ನಿಧಿಯಿಂದ ರೂ.15 ಲಕ್ಷ, ಸಂಸತ್ ಸದಸ್ಯರ ನಿಧಿಯಿಂದ ರೂ.5 ಲಕ್ಷ ಹಾಗೂ ರಾಷ್ಟ್ರೀಯ ಆರೋಗ್ಯ ಅಭಿಯಾನದ ಯೋಜನೆಯಡಿ ಕೇಂದ್ರ ಸರ್ಕಾರವು ನೀಡುವ ಪೂರಕ ಅನುದಾನದಿಂದ ರೂ.7.00 ಲಕ್ಷಗಳನ್ನು ಭರಿಸಲು ಉದ್ದೇಶಿಸಲಾಗಿದೆ. ಮಾನ್ಯ ಶಾಸಕರುಗಳು ಹಾಗೂ ಮಾನ್ಯ ಸಂಸತ್ ಸದಸ್ಯರುಗಳು ತಾಲ್ಲೂಕು ಆಸ್ಪತ್ರೆಗಳಲ್ಲಿ ತೀವ್ರ ನಿಗಾ ಘಟಕ ಸ್ಥಾಪಿಸಲು ಅನುದಾನ ನೀಡುವಂತೆ ಮನವಿ ಮಾಡಲಾಗುವುದು. ಮಾನ್ಯ ಸದಸ್ಯರುಗಳು ಐ.ಸಿ.ಯು ಘಟಕ ನಿರ್ಮಾಣಕ್ಕೆ ಅನುದಾನವನ್ನು ನೀಡಿದಲ್ಲಿ ಅವರ ಕ್ಷೇತ್ರ ವ್ಯಾಪ್ತಿಯಲ್ಲಿನ ಆಸ್ಪತ್ರೆಗಳಲ್ಲಿ ಐ.ಸಿ.ಯು. ಘಟಕ ಸ್ಥಾಪಿಸಲು ಜರುಗಿಸಲಾಗುವುದು. ಆದ್ದರಿಂದ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಆಕುಕ 165 ಹೆಚ್‌ಪಿಸಿ 2016, ಬೆಂಗಳೂರು, ದಿನಾಂಕ: 01-10-2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ವೆಂಟಿಲೇಟರ್ ಸಹಿತ ತೀವ್ರ ನಿಗಾ ಘಟಕಗಳನ್ನು ಸ್ಥಾಪಿಸಲು ಸರ್ಕಾರವು ತಾತ್ವಿಕ ಒಪ್ಪಿಗೆ ನೀಡಿದೆ. ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಶಾಸಕರ ನಿಧಿಯಿಂದ ರೂ.15 ಲಕ್ಷ, ಸಂಸತ್ ಸದಸ್ಯರ ನಿಧಿಯಿಂದ ರೂ.5 ಲಕ್ಷ

ಹಾಗೂ ರಾಷ್ಟ್ರೀಯ ಆರೋಗ್ಯ ಅಭಿಯಾನದ ಯೋಜನೆಯಡಿ ಕೇಂದ್ರ ಸರ್ಕಾರವು ನೀಡುವ ಪೂರಕ ಅನುದಾನದಿಂದ ರೂ.7.00 ಲಕ್ಷಗಳನ್ನು ಭರಿಸಲು ಉದ್ದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ. ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಇವರಿಗೆ:

1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2) ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
4) ಅಪರ ನಿರ್ದೇಶಕರು, ಕರ್ನಾಟಕ ಸ್ಟೇಟ್ ಡ್ರಗ್ಸ್ ಅಂಡ್ ಲಾಜಿಸ್ಟಿಕ್ಸ್ ವೇರ್ ಹೌಸಿಂಗ್ ಸೊಸೈಟಿ, ನಂ. 1, ಡಾ: ಸಿದ್ದಯ್ಯ ಪುರಾಣಿಕ್ ರಸ್ತೆ, ಕೆ.ಹೆಚ್.ಬಿ. ಕಾಲೋನಿ, ಮಾಗಡಿ ರಸ್ತೆ, ಬೆಂಗಳೂರು-79.
5) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
6) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರ ಮುಖಾಂತರ)
7) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.